## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯದ ಶಿಕ್ಷಣ ಇಲಾಖೆಯ (ಪ್ರಾಥಮಿಕ ಹಾಗೂ ಪ್ರೌಢ) ಕಾರ್ಯದರ್ಶಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ:1) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 114 ವಿವಿಧ 90, ದಿನಾಂಕ: 18-11-1995.

2) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಸಿಎ 12 ಎಆರ್‌ಡಿ 2007, ದಿನಾಂಕ: 04-12-2007.

-------

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ: 18-11-1995ರ ಅಧಿಸೂಚನೆ ಸಂಖ್ಯೆ: ಇಡಿ 114 ವಿವಿಧ 90 ರಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶ ಹೊರಡಿಸಲಾಗಿದೆ.

ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಇಲಾಖೆಗಳ ಅಧಿಕಾರಿಗಳ ಸಂಖ್ಯೆ ಹೆಚ್ಚಿದ್ದು ಅವರ ಸಂಬಂಧ ಬಹಳಷ್ಟು ಇಲಾಖಾ ವಿಚಾರಣೆ ಪ್ರಕರಣಗಳು ಈ ಇಲಾಖೆಯಲ್ಲಿ ಬಾಕಿ ಇದ್ದು, ಕಾಲಕಾಲಕ್ಕೆ ಶೀಘ್ರಗತಿಯಲ್ಲಿ ವಿಲೇವಾರಿ ಮಾಡಬೇಕಾಗಿರುತ್ತದೆ.

ಕರ್ನಾಟಕ ಸರ್ಕಾರದ (ವ್ಯವಹಾರ ನಡೆಸುವ) ನಿಯಮಗಳು, 1977ರ ಅನುಸೂಚಿ-2ರ ಅಂಶ 8ರ ಪ್ರಕಾರ ಕರ್ನಾಟಕ ಆಡಳಿತ ಸೇವೆ ಸಮೂಹ-ಎ ಹಿರಿಯ ಶ್ರೇಣಿ ಅಧಿಕಾರಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಹಂತದ ಅಧಿಕಾರಿಗಳ ವಿರುದ್ಧ ಶಿಸ್ತು ಪ್ರಕರಣಗಳಿಗೆ ಸಂಬಂಧಪಟ್ಟ ಪ್ರಕರಣಗಳನ್ನು ಮಾತ್ರ ಮಾನ್ಯ ಮುಖ್ಯ ಮಂತ್ರಿಯವರಿಗೆ ಸಲ್ಲಿಸಬೇಕಾಗಿತ್ತು. ಇನ್ನು ಉಳಿದ ಪ್ರಕರಣಗಳನ್ನು ಇಲಾಖಾ ಸಚಿವರೇ ಅಂತಿಮ ನಿರ್ಣಯ ಕೈಗೊಳ್ಳುತ್ತಿದ್ದರು.

ಆದರೆ ಶಿಕ್ಷಣ ಇಲಾಖೆಯಲ್ಲಿ ಸಮೂಹ-ಎ ಗುಂಪಿನ ಅಧಿಕಾರಿಗಳ ಸಂಖ್ಯೆ ಸುಮಾರು 2000 ಇರುವ ಹಿನ್ನೆಲೆಯಲ್ಲಿ ಸಮೂಹ-ಎ ಹಾಗೂ ತತ್ಸಮಾನ ಹುದ್ದೆಗಳಲ್ಲಿ ಕೆಲಸ ಮಾಡುವ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳ ಉಪ ನಿರ್ದೇಶಕರು ಹಾಗೂ ತತ್ಸಮಾನ ಹುದ್ದೆಯನ್ನು ಹೊಂದಿರುವ ಅಧಿಕಾರಿಗಳು ಹಾಗೂ ಅದಕ್ಕಿಂತ ಕಡಿಮೆ ದರ್ಜೆಯ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇರುವ ಪ್ರಕರಣಗಳಲ್ಲಿ ಹಾಗೂ ಇಲಾಖಾ ವಿಚಾರಣೆ ಪ್ರಾರಂಭಿಸಬೇಕಾಗಿರುವ ಪ್ರಕರಣಗಳಲ್ಲಿ ಇಲಾಖಾ ವಿಚಾರಣೆ ನಡೆಸಲು ಮಂಜೂರಾತಿ ನೀಡುವ ಹಾಗೂ ಇಲಾಖಾ ವಿಚಾರಣೆ ನಂತರ ನೀಡುವಂತಹ ವಿಚಾರಣಾ ವರದಿಯನ್ನು ಅನುಸರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957 ಅಡಿ ಲಘು ದಂಡನೆ ವಿಧಿಸುವ ಅಧಿಕಾರವನ್ನು ಸರ್ಕಾರದ ಕಾರ್ಯದರ್ಶಿಯವರಿಗೆ ನೀಡುವುದು ಸೂಕ್ತವೆಂದು ಭಾವಿಸಿದೆ. ಅಲ್ಲದೆ ಸಿ.ಬಿ.ಎಸ್.ಸಿ ಮತ್ತು ಐ.ಸಿ.ಎಸ್.ಸಿ ಸಂಯೋಜನೆ ಶಾಲೆ ನಡೆಸಲು ನಿರಾಕ್ಷೇಪಣೆ ಪತ್ರ ನೀಡುವ ಬಗ್ಗೆಯೂ ಸರ್ಕಾರದ ಕಾರ್ಯದರ್ಶಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವುದು ಸೂಕ್ತವೆಂದು ಭಾವಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 13 ವಿವಿಧ 2008, ಬೆಂಗಳೂರು**
**ದಿನಾಂಕ:15-03-2008**

ಸರ್ಕಾರದ ಆದೇಶ ಸಂಖ್ಯೆ: ಇಡಿ 114 ವಿವಿಧ 90, ದಿನಾಂಕ: 18-11-1995ರ ಆದೇಶ ಹಾಗೂ ಅಧಿಸೂಚನೆ ಸಂಖ್ಯೆ: ಡಿಸಿಎ 12 ಎಆರ್‌ಡಿ 2007, ದಿನಾಂಕ: 04-12-2007ರಲ್ಲಿ ಆದೇಶಿಸಿರುವ ಅಧಿಕಾರ ಪ್ರತ್ಯಾಯೋಜಿಸುವ ಆದೇಶವನ್ನು ಮುಂದುವರೆಸುತ್ತಾ, ಸರ್ಕಾರದ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ ಇವರಿಗೆ ಈ ಕೆಳಕಂಡ ಅಧಿಕಾರಗಳನ್ನು ಪ್ರತ್ಯಾಯೋಜಿಸಲಾಗಿದೆ.

I) ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಉಪನಿರ್ದೇಶಕರು ಹಾಗೂ ತತ್ಸಮಾನ ಸಮೂಹ 'ಎ' ವೃಂದದ ಅಧಿಕಾರಿಗಳನ್ನು

(ಅ) ಶಿಸ್ತು ಕ್ರಮ ಬಾಕಿ ಇರಿಸಿ ಅಮಾನತ್ತಿನಲ್ಲಿಡುವುದು.
(ಆ) ಈ ಕುರಿತಂತೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆ ಸೂಚನೆಗಳನ್ವಯ ಅಮಾನತ್ತಿನ ಆದೇಶವನ್ನು ತೆರವುಗೊಳಿಸುವುದು.
(ಇ) ಶಿಸ್ತು ಕ್ರಮ ಹೂಡಲು ಮಂಜೂರಾತಿ ನೀಡುವುದು.
(ಈ) ವಿಚಾರಣಾಧಿಕಾರಿ ನೇಮಕ ಮಾಡುವುದು.
(ಉ) ವಿಚಾರಣಾ ವರದಿ ಪರಿಶೀಲಿಸಿ, ಕಾಲಕಾಲಕ್ಕೆ ಹೊರಡಿಸಿದ ಆದೇಶ/ಸುತ್ತೋಲೆ ಸೂಚನೆಗಳನ್ವಯ ವಿಧಿವಿಧಾನವನ್ನು ಅನುಸರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳ (1957) ನಿಯಮ 8ರ ಅಡಿ ನಮೂದಿಸಿರುವ ಲಘು ದಂಡನೆಗಳನ್ನು ವಿಧಿಸುವುದು.
(ಊ) ನಿವೃತ್ತ ಅಧಿಕಾರಿಗಳಿಗೆ ಸಂಬಂಧಿಸಿದಂತೆ, ಪಿಂಚಣಿ ಕಡಿತ, ನಷ್ಟ ವಸೂಲಿ, ಸಿವಿಲ್ ದಾವೆ ಹೂಡುವುದು ಹಾಗೂ ಆ ಸಂಬಂಧದ ದಂಡನೆಗಳನ್ನು ವಿಧಿಸುವುದು.

II) ಸಿ.ಬಿ.ಎಸ್.ಸಿ/ಐ.ಸಿ.ಎಸ್.ಸಿ. ಪಠ್ಯಕ್ರಮದಲ್ಲಿ ಶಾಲೆ ನಡೆಸಲು ನಿರಾಕ್ಷೇಪಣಾ ಪತ್ರ ನೀಡುವುದು.

ಭಾರತದ ರಾಷ್ಟ್ರಪತಿಗಳ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎಂ.ನಂದಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ.
ಶಿಕ್ಷಣ ಇಲಾಖೆ, (ಸಾಮಾನ್ಯ).

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಬೆಂಗಳೂರು. ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು ಸರ್ಕಾರಕ್ಕೆ 300 ಪ್ರತಿಗಳು ಮತ್ತು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-560001 ಇವರಿಗೆ 200 ಪ್ರತಿಗಳನ್ನು ಕಳುಹಿಸುವಂತೆ ಕೋರಲಾಗಿದೆ.

1. ಮಹಾಲೇಖಪಾಲರು, (ಕರ್ನಾಟಕ ಎ&ಇ), (ಲೆಕ್ಕಪರಿಶೋಧನೆ–1), (ಲೆಕ್ಕಪರಿಶೋಧನೆ–2), ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
4. ಆಯುಕ್ತರು, ಲೋಕ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣ ಅಧಿಕಾರಿಗಳು.
8. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–560001.
9. ನಿರ್ದೇಶಕರು, (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–560001.
10. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬನಶಂಕರಿ, 3ನೇ ಹಂತ, ಬೆಂಗಳೂರು–560085.
11. ಜಂಟಿ ನಿರ್ದೇಶಕರು ಮತ್ತು ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ (ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಖಾಂತರ)
12. ಪ್ರಧಾನ ಸಂಪಾದಕರು, ಶಿಕ್ಷಣ ವಾರ್ತೆ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು 560001 ಇವರಿಗೆ ಶಿಕ್ಷಣ ವಾರ್ತೆಯಲ್ಲಿ ಪ್ರಕಟಿಸುವಂತೆ ಕೋರಿ.
13. ಮಾಹಿತಿ ಕೇಂದ್ರ ಶಿಕ್ಷಣ ಇಲಾಖೆ (ಪ್ರಕಟಿಸುವ ಸಲುವಾಗಿ), ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು.

ಪ್ರತಿ:

1. ಸರ್ಕಾರದ ಅಪರ/ಜಂಟಿ/ಉಪ/ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ.
2. ಎಲ್ಲಾ ಶಾಖೆಯ ಶಾಖಾಧಿಕಾರಿಗಳು, ಶಿಕ್ಷಣ ಇಲಾಖೆ.
3. ಘನತೆವೆತ್ತ ರಾಜ್ಯಪಾಲರ ಸಲಹೆಗಾರರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
5. ಶಾಖಾಧಿಕಾರಿ, ಶಿಕ್ಷಣ ಇಲಾಖೆ, ಸಾಮಾನ್ಯ–2ಶಾಖೆ (ಕಂಪೆಂಡಿಯಮ್ ಸಲುವಾಗಿ)
6. ಶಾಖಾ ರಕ್ಷಾ ಕಡತ.
7. ಹೆಚ್ಚುವರಿ ಪ್ರತಿ–03.